ಪ್ರಜಾವಾಣಿ
ಕರ್ನಾಟಕದ ಅತ್ಯಂತ ವಿಶ್ವಾಸಾರ್ಹ ಸುದ್ದಿ ಮಾಧ್ಯಮ

**Saturday 29th July 2023, Page No.II**

**VTU Event Ceremony: Honorary Doctorate RSST Hon. Sec.A.V.S. Murthy**

# ಮೂವರಿಗೆ ವಿಟಿಯು ಗೌರವ

## ಚೆನ್ನೈ ಐಐಟಿ ನಿರ್ದೇಶಕ ವಿ.ಕಾಮಕೋಟಿಯಿಂದ ಭಾಷಣ

ಪ್ರಜಾವಾಣಿ ವಾರ್ತೆ

**ಬೆಳಗಾವಿ:** 'ಇಲ್ಲಿನ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ 23ನೇ ಘಟಿಕೋತ್ಸವ ಆಗಸ್ಟ್ 1ರಂದು ಬೆಳಿಗ್ಗೆ 11.30ಕ್ಕೆ ಜ್ಞಾನ ಸಂಗಮ ಆವರಣದ ಡಾ.ಎಪಿಜೆ ಅಬ್ದುಲ್ ಕಲಾಂ ಸಭಾಭವದಲ್ಲಿ ನಡೆಯಲಿದೆ' ಎಂದು ಕುಲಪತಿ ಪ್ರೊ.ಎಸ್. ವಿದ್ಯಾಶಂಕರ ತಿಳಿಸಿದರು.



ನಿರ್ಮಲಾನಂದನಾಥ ಸ್ವಾಮೀಜಿ



ಎ.ವಿ.ಎಸ್. ಮೂರ್ತಿ



ಎಚ್.ಎನ್.ಶೆಟ್ಟಿ

'ಅಧ್ಯಾತ್ಮ ಕ್ಷೇತ್ರದಲ್ಲಿ ಸಾಧನೆ-ಆದಿ ಚುಂಚನಗಿರಿ ಮಹಾಸಂಸ್ಥಾನ ಮಠದ ನಿರ್ಮಲಾನಂದನಾಥ ಸ್ವಾಮೀಜಿ, ಶಿಕ್ಷಣ ಕ್ಷೇತ್ರದ ಸಾಧನೆ- ರಾಷ್ಟ್ರೀಯ ಶಿಕ್ಷಣ ಸಮಿತಿ ಟ್ರಸ್ಟ್‌ನ ಗೌರವ ಕಾರ್ಯದರ್ಶಿ ಎ.ವಿ.ಎಸ್. ಮೂರ್ತಿ ಹಾಗೂ ಔದ್ಯೋಗಿಕ ಕ್ಷೇತ್ರದ ಸಾಧನೆ ಪರಿಗಣಿಸಿ ಮೈಸೂರು ಮೆಕ್ರ್ಯಾನ್ ಟೈಲ್ ಕಂಪನಿ ಅಧ್ಯಕ್ಷ ಎಚ್.ಎನ್.ಶೆಟ್ಟಿ ಅವರಿಗೆ ಗೌರವ ಡಾಕ್ಟರೇಟ್ ನೀಡಲಾಗುವುದು' ಎಂದು ಅವರು ಶುಕ್ರವಾರ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು.

ಚೆನ್ನೈನ ಭಾರತೀಯ ತಂತ್ರಜ್ಞಾನ ಸಂಸ್ಥೆಯ ನಿರ್ದೇಶಕ ವಿ.ಕಾಮಕೋಟಿ ಘಟಿಕೋತ್ಸವ ಭಾಷಣ ಮಾಡುವರು. ರಾಜ್ಯಪಾಲ ಥಾವರಚಂದ ಗೆಹಲೋತ್ ಅಧ್ಯಕ್ಷತೆ ವಹಿಸುವರು. ಉನ್ನತ ಶಿಕ್ಷಣ ಸಚಿವ ಎಂ.ಸಿ.ಸುಧಾಕರ ಅತಿಥಿಯಾಗಿ ಪಾಲ್ಗೊಳ್ಳುವರು ಎಂದರು.

### 42,545 ವಿದ್ಯಾರ್ಥಿಗಳಿಗೆ ಪದವಿ

'ಘಟಿಕೋತ್ಸವದಲ್ಲಿ ಬಿ.ಇ, ಬಿ.ಟೆಕ್ ಸೇರಿ 42,545 ಪದವಿ, ಬಿ.ಪ್ಲಾನ್- 6, ಬಿ.ಆರ್ಕ್ 1,003, ಪಿಎಚ್.ಡಿ 550, 4 ಎಂಎಸ್‌ಸಿ (ಸಂಶೋಧನೆ) ಪದವಿಗಳನ್ನು ಪ್ರದಾನ ಮಾಡಲಾಗುವುದು. ಈ ಬಾರಿ, ಬೆಂಗಳೂರು ಸರ್ ಎಂ.ವಿಶ್ವೇಶ್ವರಯ್ಯ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯ ಸಿವಿಲ್ ಎಂಜಿನಿಯರಿಂಗ್ ವಿದ್ಯಾರ್ಥಿ ಮದಕ್‌ಶಿರಾ ಚಿನ್ಮಯ ವಿಕಾಸ ಅವರು 13 ಚಿನ್ನದ ಪದಕ ಪಡೆದು ಮೊದಲಿಗರಾಗಿದ್ದಾರೆ' ಎಂದು ಪ್ರೊ.ಎಸ್. ವಿದ್ಯಾಶಂಕರ ಹೇಳಿದರು.



ಮದಕ್‌ಶಿರಾ ಚಿನ್ಮಯ ವಿಕಾಸ